ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016–17 ದಿನಾಂಕ: 06–06–2016

# ಪತ್ರಿಕಾ ಪ್ರಕಟಣೆ

## ಫಲಿತಾಂಶ ಪ್ರಕಟ

ಬೆಂಗಳೂರು, ಜೂನ್ 6 (ಕರ್ನಾಟಕ ವಾರ್ತೆ)

ಅಖಿಲ ಭಾರತ ವೃತ್ತಿ ಪರೀಕ್ಷೆ ಕುಶಲಕರ್ಮಿ ತರಬೇತಿ ಯೋಜನೆಯಡಿಯಲ್ಲಿ ಜನವರಿ – 2016 ರಲ್ಲಿ ನಡೆದ ಸೆಮಿಸ್ಟರ್ ಪರೀಕ್ಷೆಗಳ (Non Mentor Council) ಫಲಿತಾಂಶವನ್ನು ದಿನಾಂಕ 07–06–2016 ರಿಂದ ಫಲಿತಾಂಶವು ಇಲಾಖಾ ವೆಬ್‌ಸೈಟ್‌ನಲ್ಲಿ www.emptrg.kar.nic.in ಲಭ್ಯವಿರುತ್ತದೆ. ಫಲಿತಾಂಶ ಪ್ರಕಟವಾದ ಒಂದು ತಿಂಗಳ ನಂತರ ಅಂಕಪಟ್ಟಿಗಳನ್ನು ಪಡೆಯಲು ಆಯಾ ಪರೀಕ್ಷಾ ಕೇಂದ್ರಗಳ ಪ್ರಾಚಾರ್ಯರನ್ನು ಸಂಪರ್ಕಿಸಬಹುದು.

ಬಾಬು:ಜಿಪಿಆರ್

## RESULTS ANNOUNCED

**Bengaluru June 6th (Karnataka Information)**

**The results of the All India Trade Test under CTS Semester examination (Non Mentor Council) held during January 2016 will be announced in the departmental website at www.emptrg.kar.nic.in on 07-06-2016. The concerned Trainees may contact the Principals to collect the marks cards after one month.**

**babu;gpr.**

## ಕೈಲಾಸ ಮಾನಸ ಸರೋವರ ಯಾತ್ರಿಕರಿಗೆ ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಜೂನ್ 6 (ಕರ್ನಾಟಕ ವಾರ್ತೆ)

**2016–17 ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದಿಂದ ಪ್ರಥಮ ಬಾರಿಗೆ ಕೈಲಾಸ ಮಾನಸ ಸರೋವರ ಯಾತ್ರೆ ಕೈಗೊಂಡ ಯಾತ್ರಿಕರಿಗೆ ಸರ್ಕಾರ ಪ್ರೋತ್ಸಾಹ ಧನ ನೀಡಲು ಉದ್ದೇಶಿಸಲಾಗಿದೆ. ಕರ್ನಾಟಕ ರಾಜ್ಯದ ಖಾಯಂ ನಿವಾಸಿಗಳು ನೀಡಿರುವ ಮಾರ್ಗಸೂಚಿಗಳ ಷರತ್ತುಗಳಿಗೆ ಒಳಪಟ್ಟವರು ಮಾತ್ರ ಧನಸಹಾಯ ಪಡೆಯಲು ಅರ್ಹರಾಗಿರುತ್ತಾರೆ. ಈ ಉದ್ದೇಶಕ್ಕಾಗಿ ಪಾಸ್‌ಪೋರ್ಟ್‌ನಲ್ಲಿ ನಮೂದಿಸಲಾಗಿರುವ ಕರ್ನಾಟಕ ರಾಜ್ಯದ ವಿಳಾಸವನ್ನು ಪರಿಗಣಿಸಲಾಗುವುದು. ಈಗಾಗಲೇ ಮಾನಸ ಸರೋವರ ಯಾತ್ರೆ ಕೈಗೊಂಡು ಸರ್ಕಾರದಿಂದ ಧನಸಹಾಯ ಪಡೆದ ಯಾತ್ರಿಕರು, ಇದೇ ಉದ್ದೇಶಕ್ಕಾಗಿ ಎರಡನೇ ಬಾರಿಗೆ ಈ ಧನಸಹಾಯ ಪಡೆಯಲು ಅರ್ಹರಾಗುವುದಿಲ್ಲ. ಸರ್ಕಾರದ ಮಾರ್ಗಸೂಚಿಗಳಿಗೆ ಒಳಪಟ್ಟು ಧನಸಹಾಯ ಪಡೆಯಲು ಇಚ್ಚಿಸುವ ಯಾತ್ರಿಕರು ತಾವು ಯಾತ್ರೆ ಮುಗಿಸಿದ್ದಕ್ಕೆ ಪಡೆಯುವ ಪ್ರಮಾಣ ಪತ್ರದ ದಿನಾಂಕದಿಂದ ನಾಲ್ಕು ತಿಂಗಳ ಒಳಗೆ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಈ ಕಚೇರಿಯಲ್ಲಿ ಖುದ್ದು ಪಡೆದು ಈ ಕೆಳಕಂಡ ವಿಳಾಸಕ್ಕೆ ಅರ್ಜಿ ಸಲ್ಲಿಸಬೇಕು. ನಿಗದಿತ ಅವಧಿ ಮೀರಿ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ವಿವರಗಳಿಗಾಗಿ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ. ಆಯುಕ್ತರು, ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ, 4ನೇ ಮಹಡಿ, ಶ್ರೀ ಮಿಂಟೋ ಶ್ರೀ ಆಂಜನೇಯ ವಾರ್ತಾ ಭವನ, ಆಲೂರು ವೆಂಕಟರಾವ್ ರಸ್ತೆ, ಚಾಮರಾಜಪೇಟೆ, ಬೆಂಗಳೂರು –18, ದೂರವಾಣಿ 080–26709689. Email:endowmentcommissioner@gmail.com.**

ಬಾಬು/ಕೆಎಂ

# Financial Assistance for Kailasa Manasa Sarovara Yatra

Bengaluru, June 6, 2016 (Karnataka Information)

**Government has proposed to give financial assistance to the pilgrims from the State, who visit Kailasa Manasa Sarovara for the first time, for the year 2016-17. The permanent residents of Karnataka and those who comply the terms and conditions mentioned in the Government Order are eligible to get the benefit of this scheme. The address mentioned in the Passport will be taken as proof for Considering the Pilgrim the resident of the State of Karnataka. Those who have already availed the benefit of this scheme are not entitled for the second time. The Pilgrims who wish to avail the benefit of this scheme should fill in the proforma applications and submit it to the address given below, within four months from the date of the certificate of completion of the pilgrimage. Application submitted after the stipulated date will not be considered.**

**For further information on the subjects, contact Commissioner, Hindu Religious Institutions and Charitable Endowments, 4th Floor, Minto Sree Anjaneya Vartha Bhavan, Alur Venkartarao Road, Chamarajpet,**

**Bengaluru – 560 018. Phone 080 – 26709689 Email. endowment commissioner@gmail.com.**

**babu/km**